**Akashvani : Bangalore**
**Regional Bulletin In Kannada**
**23.03.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**23.03.2024 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಒಂದು ಕೋಟಿ ೮೦ ಲಕ್ಷ ನವಮತದಾರರು ಭಾಗಿ - ಚುನಾವಣಾ ಆಯೋಗದ ಮಾಹಿತಿ

೨. ೨೨೩ ತಾಲೂಕುಗಳಲ್ಲಿ ತೀವ್ರ ಬರ - ಕೇಂದ್ರ ಸರ್ಕಾರ ಸ್ಪಂದಿಸುತ್ತಿಲ್ಲ - ಸಿದ್ದರಾಮಯ್ಯ ಆರೋಪ

೩. ರಾಜ್ಯ ಸರ್ಕಾರದಿಂದ ಗ್ಯಾರಂಟಿ ಯೋಜನೆಗಳಿಗೆ ಆದ್ಯತೆ - ರಾಜ್ಯದ ಹಿತರಕ್ಷಣೆಗೆ ನಿರ್ಲಕ್ಷ್ಯ - ಬಿಜೆಪಿ ಟೀಕೆ

೪. ೨೮ ಲೋಕಸಭಾ ಮತಕ್ಷೇತ್ರಗಳಿರುವ ಜಿಲ್ಲೆಗಳಲ್ಲಿ ಚುನಾವಣಾ ಚಟುವಟಿಕೆ ಬಗ್ಗೆ ಮಾಹಿತಿ

೫. ಹಾವೇರಿ-ಕೊಪ್ಪಳ ಜಿಲ್ಲೆಗಳಲ್ಲಿ ನೀರಿನ ಸಂಕಷ್ಟ - ಪರ್ಯಾಯ ವ್ಯವಸ್ಥೆಗಳಿಗೆ ಸಿದ್ಧತೆ

**<><*<><>*><>**

೨೦೨೪ರ ಲೋಕಸಭಾ ಚುನಾವಣೆಯಲ್ಲಿ ಅಂದಾಜು ಒಂದು ಕೋಟಿ ೮೦ ಲಕ್ಷ ನವ ಮತದಾರರು ತಮ್ಮ ಅಮೂಲ್ಯ ಹಕ್ಕನ್ನು ಮೊದಲ ಬಾರಿಗೆ ಚಲಾಯಿಸಲಿದ್ದಾರೆ. ಇವರೆಲ್ಲ ೧೮-೧೯ರ ಪ್ರಾಯದವರು. ಮೊದಲ ಬಾರಿಗೆ ಮತ ಚಲಾಯಿಸುವ ಯುವಕರಿಗೆ ಅವರ ಈ ಪವಿತ್ರ ಕರ್ತವ್ಯದ ಮಹತ್ವವನ್ನು ಮನಗಾಣಿಸುವ ಸಲುವಾಗಿ ಸಾಮಾಜಿಕ ಜಾಲತಾಣಗಳಲ್ಲಿ 'ನಾನು ಖಂಡಿತ ಮತ ಚಲಾಯಿಸುತ್ತೇನೆ' ಎನ್ನುವ ಪ್ರಚಾರ ಆಂದೋಲನಗಳು ನಡೆಯುತ್ತಿವೆ. ಈ ಬಾರಿ ಚುನಾವಣೆಯಲ್ಲಿ ಭಾಗವಹಿಸುವ ಯುವ ಮತದಾರರ ಪೈಕಿ ೨೦ ರಿಂದ ೨೯ ವರ್ಷ ವಯೋಮಾನದ ಅಂದಾಜು ೧೯ ಕೋಟಿ ೭೪ ಲಕ್ಷ ಮತದಾರರು ಪಾಲ್ಗೊಳ್ಳಲಿದ್ದಾರೆ. ೧೮ ವರ್ಷಕ್ಕೆ ಮತದಾನದ ಹಕ್ಕು ದೊರೆಯುವುದಾದರೂ ಈಗ ೧೭ ವರ್ಷ ತುಂಬಿರುವ ಯುವಜನ ಸಮೂಹದಿಂದ ೧೩.೪ ಲಕ್ಷಕ್ಕೂ ಅಧಿಕ ಅರ್ಜಿಗಳನ್ನು ಮುಂಚಿತವಾಗಿಯೇ ಸ್ವೀಕರಿಸಲಾಗಿದೆ. ಕೇಂದ್ರ ಚುನಾವಣಾ ಆಯೋಗ ಯುವ ಜನರಿಗೆ ಮತದಾನಕ್ಕೆ ಪ್ರೋತ್ಸಾಹ ನೀಡುವ ಸಲುವಾಗಿ ಸಚಿನ್ ತೆಂಡುಲ್ಕರ್ ಮತ್ತು ರಾಜಕುಮಾರ್ ರಾವ್ ಅವರಂತಹ ರಾಷ್ಟ್ರೀಯ ದಿಗ್ಗಜರಿಂದ ಸಂದೇಶಗಳನ್ನು ಪ್ರಸಾರ ಮಾಡುತ್ತಿದೆ. ಸಾಮಾಜಿಕ ಮಾಧ್ಯಮ ಅಭಿಯಾನಗಳು ಮತ್ತು ರೇಡಿಯೋ ಮೂಲಕವೂ ಸಂದೇಶಗಳನ್ನು ಪ್ರಸಾರ ಮಾಡಲಾಗುತ್ತದೆ.

**<><*<><>*><>**

ರಾಜ್ಯ ಸರ್ಕಾರ ೨೨೩ ತಾಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಿದ್ದು, ಪರಿಹಾರ ಮೊತ್ತಕ್ಕೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರೂ ಇದುವರೆಗೂ ಬಿಡುಗಡೆಯಾಗಿಲ್ಲ ಎಂದು ಮುಖ್ಯಮಂತ್ರಿ

ಸಿದ್ದರಾಮಯ್ಯ ಆಪಾದಿಸಿದ್ದಾರೆ. ಬೆಂಗಳೂರಿನ ತಮ್ಮ ಗೃಹಕಚೇರಿ ಕೃಷ್ಣಾದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯಕ್ಕೆ ಬರಪರಿಹಾರ ಬಿಡುಗಡೆ ಮಾಡಬಹುದು ಎಂದು ೫ ತಿಂಗಳು ಕಾದಿದೆ. ರೈತರು ಮತ್ತು ಸಾರ್ವಜನಿಕರ ನೆರವಿಗಾಗಿ ಕುಡಿಯುವ ನೀರು ಮತ್ತು ಮೇವು ಪೂರೈಕೆಗೆ ರಾಜ್ಯ ಸರ್ಕಾರ ಇದುವರೆಗೆ ವೆಚ್ಚ ಮಾಡಿದೆ. ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ ೧೮ ಸಾವಿರದ ೧೭೧ ಕೋಟಿ ರೂಪಾಯಿ ಬರ ಪರಿಹಾರ ಬಿಡುಗಡೆಗೆ ಕೇಂದ್ರಕ್ಕೆ ಮೂರು ಬಾರಿ ಮನವಿ ಮಾಡಲಾಗಿದೆ ಎಂದರು. ಬರ ಪೀಡಿತ ತಾಲೂಕುಗಳಲ್ಲಿ ಪರಿಸ್ಥಿತಿಯನ್ನು ಕೇಂದ್ರದ ತಂಡ ಖುದ್ದಾಗಿ ಪರಿಶೀಲಿಸಿ ತನ್ನ ವರದಿಯನ್ನು ಸಲ್ಲಿಸಿವೆ. ಇದುವರೆಗೂ ಕೇಂದ್ರದಿಂದ ಬರಬೇಕಾಗಿರುವ ಮೊತ್ತ ತಲುಪದ ಹಿನ್ನೆಲೆಯಲ್ಲಿ ರಾಜ್ಯಕ್ಕೆ ಕೂಡಲೇ ಕೊಡಬೇಕಾದ ಮೊತ್ತವನ್ನು ಬಿಡುಗಡೆ ಮಾಡುವಂತೆ ಕೇಂದ್ರಕ್ಕೆ ಸೂಚಿಸಬೇಕೆಂದು ಸುಪ್ರೀಂಕೋರ್ಟ್‌ಗೆ ರಿಟ್‌ಅರ್ಜಿ ಸಲ್ಲಿಸಲಾಗಿದೆ ಎಂದು ಅವರು ಹೇಳಿದರು. ಈಗ ಸುಪ್ರೀಂಕೋರ್ಟ್‌ಗೆ ರಜೆ ಅವಧಿಯಾಗಿದ್ದು, ಒಂದು ವಾರದ ನಂತರ ಮತ್ತೆ ನ್ಯಾಯಾಲಯ ಕಾರ್ಯಾರಂಭ ಮಾಡಿದಾಗ ಈ ಅರ್ಜಿಯ ವಿಚಾರಣೆ ನಡೆಯಲಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

**<><*<><>*><>**

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಆದ್ಯತೆ ನೀಡುವ ಮೂಲಕ ಬರ ಪರಿಹಾರದಂತಹ ತುರ್ತು ಅಗತ್ಯವನ್ನು ಕಾಂಗ್ರೆಸ್ ಸರ್ಕಾರ ನಿರ್ಲಕ್ಷಿಸಿದೆ ಎಂದು ವಿಧಾನಪರಿಷತ್ ಸದಸ್ಯೆ ಹೇಮಲತಾ ನಾಯಕ್ ಟೀಕಿಸಿದ್ದಾರೆ. ಕೊಪ್ಪಳದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳಿಗೆ ಸರ್ಕಾರ ರಾಜ್ಯದ ಜನರ ತೆರಿಗೆ ಹಣವನ್ನು ಬಳಸಿ ಬೊಕ್ಕಸವನ್ನು ಖಾಲಿ ಮಾಡಿದೆ. ಬರ ಪರಿಹಾರ ಕಾರ್ಯದಲ್ಲಿ ಸಂಪೂರ್ಣ ವಿಫಲವಾಗಿದೆ. ರೈತರ ಹಿತವನ್ನು ಕಾಪಾಡುತ್ತಿಲ್ಲ ಎಂದು ಅವರು ಹೇಳಿದರು. ಬರಪೀಡಿತ ತಾಲೂಕುಗಳಿಂದ ಜನರು ಗುಳೆ ಹೋಗುವುದನ್ನು ತಪ್ಪಿಸಲು ಸರ್ಕಾರ ಅಗತ್ಯ ವ್ಯವಸ್ಥೆ ಮಾಡುತ್ತಿಲ್ಲ ಎಂದು ಹೇಮಲತಾ ನಾಯಕ್ ಆಪಾದಿಸಿದರು.

**<><*<><>*><>**

ರಾಜ್ಯದ ೨೮ ಲೋಕಸಭಾ ಮತಕ್ಷೇತ್ರಗಳನ್ನು ಒಳಗೊಂಡ ಜಿಲ್ಲೆಗಳಲ್ಲಿ ನಡೆದಿರುವ ಚುನಾವಣಾ ಚಟುವಟಿಕೆಗಳ ಬಗ್ಗೆ ಈಗ ಮಾಹಿತಿ : ಚಾಮರಾಜನಗರ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಗೆ ಮತದಾನ ಪ್ರಮಾಣ ಹೆಚ್ಚಿಸಲು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಹನೂರು ತಾಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವೀಪ್ ಸಮಿತಿ ವತಿಯಿಂದ ಶ್ರಮದಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. 'ಚುನಾವಣಾ ಪರ್ವ ದೇಶದ ಗರ್ವ' ಎಂಬ ಘೋಷವಾಕ್ಯದೊಂದಿಗೆ ಮಲೆ ಮಹದೇಶ್ವರ ಬೆಟ್ಟದ ಮುಖ್ಯರಸ್ತೆಯಿಂದ ತಾಳುಬೆಟ್ಟದವರೆಗೆ ಈ ಕಾರ್ಯಕ್ರಮ ನಡೆಯಲಿದೆ. ಸುಮಾರು ೨೫ ಕಿಲೋಮೀಟರ್ ಮಾರ್ಗದಲ್ಲಿ ಪ್ಲಾಸ್ಟಿಕ್ ಮತ್ತಿತರ ತ್ಯಾಜ್ಯ ಸಂಗ್ರಹಿಸಿ ವಿಂಗಡಿಸುವುದರೊಂದಿಗೆ ಸಾರ್ವಜನಿಕರಲ್ಲಿ ಮತದಾನದ ಜಾಗೃತಿ ಮೂಡಿಸಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕಾಧಿಕಾರಿ ಉಮೇಶ್ ಸೂಚಿಸಿದರು.

ವಿಜಯಪುರ ಜಿಲ್ಲೆಯ ಸಂಡೂರು ಬಳ್ಳಾರಿ ಮಾರ್ಗದಲ್ಲಿ ಅನಧಿಕೃತವಾಗಿ ಸಾಗಿಸಲಾಗುತ್ತಿದ್ದ ೩೦ ಲಕ್ಷದ ೪೫ ಸಾವಿರ ರೂಪಾಯಿ ಬೆಲೆ ಬಾಳುವ ಶ್ರೀಗಂಧದ ತುಂಡುಗಳನ್ನು ಪೊಲೀಸ್ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಖಚಿತ ಸುಳಿವಿನ ಆಧಾರದ ಮೇಲೆ ದಾಳಿ ನಡೆಸಲಾಯಿತು. ವಾಹನವನ್ನು

ಜಪ್ತಿಮಾಡಲಾಗಿದ್ದು, ರಾಜ್ಯ ಅರಣ್ಯ ಇಲಾಖೆಯ ಕಾಯ್ದೆ ಅನ್ವಯ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಬಿ.ಎಲ್. ಶ್ರೀಹರಿ ಬಾಬು ತಿಳಿಸಿದ್ದಾರೆ.

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಾದ ದಿನದಿಂದ ನಿನ್ನೆಯವರೆಗೆ ೩ ಲಕ್ಷ ೭೫ ಸಾವಿರದ ೨೨ ರೂಪಾಯಿ ಮೌಲ್ಯದ ಒಟ್ಟು ೬೪೨ ಲೀಟರ್ ಮದ್ಯ ಹಾಗೂ ೫ ಲಕ್ಷ ೪೩ ಸಾವಿರದ ೫೦೦ ರೂಪಾಯಿ ಮೌಲ್ಯದ ೧.೭ ಕೆ.ಜಿ. ಮಾದಕ ವಸ್ತುವನ್ನು ವಶಪಡಿಸಿಕೊಳ್ಳಲಾಗಿದೆ. ಸಿ-ವಿಸಿಲ್ ಆಪ್ ಮೂಲಕ ಸ್ವೀಕರಿಸಿರುವ ಎಲ್ಲ ದೂರುಗಳನ್ನು ವಿಲೇವಾರಿ ಮಾಡಲಾಗಿದೆ. ರಾಷ್ಟ್ರೀಯ ಕುಂದು ಕೊರತೆಗಳ ಪರಿಹಾರ ವ್ಯವಸ್ಥೆಯ ಮೂಲಕ ಜಿಲ್ಲೆಯಲ್ಲಿ ಒಟ್ಟು ೩೬ ದೂರುಗಳು ದಾಖಲಾಗಿದ್ದು, ಈ ಪೈಕಿ ೩೧ ದೂರುಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ನಗರದ ರೈಲ್ವೆ ಕೆಳಸೇತುವೆ ಸಮೀಪ ತಾಲೂಕು ಸ್ವೀಪ್ ಸಮಿತಿಯ ಸಹಭಾಗಿತ್ವದಲ್ಲಿ ಇಂದು ಮತದಾರರ ಜಾಗೃತಿ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ರಂಗೋಲಿ ಸ್ಪರ್ಧೆಯಲ್ಲಿ ೨೫೦ಕ್ಕೂ ಹೆಚ್ಚು ಮಹಿಳೆಯರು ಪಾಲ್ಗೊಂಡು ಮತದಾನದ ಜಾಗೃತಿ ಘೋಷಣೆಗಳನ್ನು ಬರೆದು ಅರಿವು ಮೂಡಿಸಿದರು. ಜಿಲ್ಲೆಯಲ್ಲಿ ಚುನಾವಣಾ ಚೆಕ್‌ಪೋಸ್ಟ್‌ಗಳು ಕಾರ್ಯಾರಂಭ ಮಾಡಿವೆ. ಸಿಸಿಟಿವಿ ಕ್ಯಾಮರ ಅಳವಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

ಬಳ್ಳಾರಿ ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘಿಸಿ ಅನಧಿಕೃತವಾಗಿ ಸಾಗಿಸುತ್ತಿದ್ದ ೬೨೯.೯೪ ಲೀಟರ್ ಮದ್ಯ ಮತ್ತು ೨೬ ಲಕ್ಷ ರೂಪಾಯಿ ನಗದು ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ ಕುಮಾರ್ ಮಿಶ್ರ ತಿಳಿಸಿದ್ದಾರೆ.

ಸಂಡೂರು ತಾಲೂಕು ಚೋರನೂರು ಬಳಿ ಅಕ್ರಮವಾಗಿ ಕೊಂಡೊಯ್ಯುತ್ತಿದ್ದ ಗಾಂಜಾ, ಬಳ್ಳಾರಿ ನಗರದಲ್ಲಿ ೨೬ ಲಕ್ಷ ರೂಪಾಯಿ ನಗದು ಹಣ, ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದು, ಇದುವರೆಗೆ ೪೪ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಗದಗ ಜಿಲ್ಲೆಯ ನರಗುಂದ ತಾಲೂಕು ಸ್ವೀಪ್ ಸಮಿತಿ ವತಿಯಿಂದ ನೀರಲಗಿ ಗ್ರಾಮದಲ್ಲಿ ಮತದಾನ ಜಾಗೃತಿ ಅಭಿಯಾನ ನಡೆಯಿತು. ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಮಾಣಿಕ್‌ರಾವ್ ಪಾಟೀಲ್ ಮಾತನಾಡಿ, ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎನ್ನುವ ಉದ್ದೇಶದಿಂದ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ೧೮ ವರ್ಷ ತುಂಬುವ ಯುವ ಮತದಾರರಿಗೆ ವಿ.ಎಚ್.ಎ. ಆಪ್‌ನಲ್ಲಿ ಹೆಸರು ನೋಂದಾಯಿಸಲು ಅವಕಾಶವಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಮೇ ೭ ರಂದು ನಡೆಯುವ ೨ನೇ ಹಂತದ ಲೋಕಸಭೆ ಚುನಾವಣೆಯೊಂದಿಗೆ ಯಾದಗಿರಿ ಜಿಲ್ಲೆಯ ಸುರಪುರ ಮತಕ್ಷೇತ್ರಕ್ಕೆ ಉಪಚುನಾವಣೆಯೂ ನಿಗದಿಯಾಗಿದ್ದು, ಮತದಾರರು ಹಾಗೂ ಮತಕ್ಷೇತ್ರಗಳು ಹೆಚ್ಚಾಗಿವೆ. ಸುರಪುರ ವಿಧಾನಸಭಾ ಮತಕ್ಷೇತ್ರದ ಶಾಸಕರಾಗಿದ್ದ ಕಾಂಗ್ರೆಸ್‌ನ ರಾಜವೆಂಕಟಪ್ಪ ನಾಯಕ್ ಅವರ ನಿಧನದಿಂದ ತೆರವಾಗಿರುವ ಈ ಸ್ಥಾನಕ್ಕೆ ಲೋಕಸಭೆ ಚುನಾವಣೆಯ ಜೊತೆಯಲ್ಲಿಯೇ ಉಪಚುನಾವಣೆ ನಡೆಸಲು ಆದೇಶ ನೀಡಲಾಗಿದ್ದು, ರಾಜಕೀಯ ಚಟುವಟಿಕೆ ಚುರುಕಾಗಿದೆ.

ತುಮಕೂರು ಲೋಕಸಭಾ ಮತಕ್ಷೇತ್ರದಲ್ಲಿ ಈ ಬಾರಿ ೪೪ ಸಾವಿರ ಯುವ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಮತದಾನದ ಜಾಗೃತಿಗಾಗಿ ಇಂದು ಬೈಕ್ ಜಾಥಾ ನಡೆಸಲಾಯಿತು. ಪ್ರತಿಯೊಂದು ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಮತ್ತು ಜಿಲ್ಲಾ ಕೇಂದ್ರದಲ್ಲಿ ಜಾಥಾ ಮೂಲಕ ತುಮಕೂರು ಕ್ಷೇತ್ರದಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಇಂದು ಬೈಕ್ ಜಾಥಾದಲ್ಲಿ ೩೦೦ ಬೈಕ್ ಸವಾರರು ಪಾಲ್ಗೊಂಡರು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ತಿಳಿಸಿದ್ದಾರೆ.

ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ ಇಂದು ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮನೆಯಿಂದ ಮತದಾನ ಮಾಡಲು ನೋಂದಾಯಿಸಿ ಕೊಂಡಿರುವ ೮೫ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮತ್ತು ಶೇಕಡ ೪೦ ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವ ಜಿಲ್ಲೆಯ ಮತದಾರರಿಗ ೧೨-ಡಿ ಫಾರ್ಮ್ ವಿತರಿಸುವಂತೆ ಅಧಿಕಾರಿಗಳಿಗೆ ಜಿಲ್ಲಾ ಚುನಾವಣಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಕಳೆದ ೪ ದಿನಗಳಿಂದ ಈ ಕಾರ್ಯ ಪ್ರಗತಿಯಲ್ಲಿದೆ.

**<><*<><>*><>**

ರಾಜ್ಯದ ಹಲವು ಜಿಲ್ಲೆಗಳಲ್ಲಿ ಬೇಸಿಗೆಯ ಧಗೆ ಹೆಚ್ಚುತ್ತಿದ್ದು, ನೀರಿನ ಸಮಸ್ಯೆ ಎದುರಾಗಿದ್ದು, ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಆರಂಭಿಸಲಾಗಿದೆ. ಹಾವೇರಿ ನಗರಕ್ಕೆ ಮೂರ್‍ನಾಲ್ಕು ದಿನಗಳಲ್ಲಿ ಪೈಪ್‌ಲೈನ್ ಮೂಲಕ ಹೆಗ್ಗೇರಿ ಕೆರೆಯ ನೀರು ಸರಬರಾಜು ಮಾಡಲಾಗುವುದು. ಕೆರೆ ನೀರನ್ನು ಸಂಸ್ಕರಿಸಿದ ನಂತರ ಮನೆಗಳಿಗೆ ಪೂರೈಸಲಾಗುವುದು. ಈ ನೀರು ಕುಡಿಯಲು ಯೋಗ್ಯವಲ್ಲ. ಕೇವಲ ದೈನಂದಿನ ಬಳಕೆಗೆ ಮಾತ್ರ ಉಪಯೋಗಿಸಬೇಕು ಎಂದು ಜಿಲ್ಲಾಧಿಕಾರಿ ರಘುನಂದನ ಮೂರ್ತಿ ಸೂಚಿಸಿದ್ದಾರೆ. ಕುಡಿಯುವ ನೀರಿಗಾಗಿ ಹರಿಸಲಾಗಿದ್ದ ತುಂಗಭದ್ರಾ ನದಿ ನೀರು ಇನ್ನು ಮೂರು ದಿನಗಳಲ್ಲಿ ಖಾಲಿಯಾಗಲಿದೆ. ಹಾಗಾಗಿ ಕುಡಿಯಲು ನಗರಸಭೆ ಕೊಳವೆ ಬಾವಿಗಳ ನೀರನ್ನು ಬಳಸಬಹುದು. ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ಮುಂದಿನ ವಾರದ ವೇಳೆಗೆ ನೀರು ಬಿಡುಗಡೆ ಮಾಡುವ ನಿರೀಕ್ಷೆಯಿದೆ. ತುಂಗಭದ್ರಾ ನದಿಗೆ ನೀರು ಬಂದರೆ ಮುಂದಿನ ದಿನಗಳಲ್ಲಿ ಹಾವೇರಿಯ ನೀರಿನ ಸಮಸ್ಯೆ ಪರಿಹಾರವಾಗಲಿದೆ ಎಂದು ಅವರು ಹೇಳಿದ್ದಾರೆ. ಹಾವೇರಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ೧೪೯ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ನೀರು ಪೂರೈಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕೊಪ್ಪಳ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ಆದ್ಯತೆಯ ಮೇರೆಗೆ ನೀರು ಪೂರೈಸಬೇಕು ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಇಂದು ಜಿಲ್ಲೆಯ ಬರ ನಿರ್ವಹಣೆ ಮತ್ತು ಕುಡಿಯುವ ನೀರು ಪೂರೈಕೆ ಕುರಿತ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರಿ ಬೋರ್‌ವೆಲ್‌ಗಳಿಂದ ಗ್ರಾಮ ಮತ್ತು ನಗರ ಪ್ರದೇಶಗಳಿಗೆ ಕುಡಿಯುವ ನೀರು ಸರಬರಾಜು ಮಾಡಬೇಕು. ಸರ್ಕಾರಿ ಬೋರ್‌ವೆಲ್‌ಗಳಲ್ಲಿ ನೀರು ಕಡಿಮೆಯಾಗಿದ್ದರೆ ಖಾಸಗಿಯವರೊಂದಿಗೆ ಒಪ್ಪಂದ ಮಾಡಿಕೊಂಡು ನೀರು ಒದಗಿಸಬೇಕು. ಜೂನ್ ೩೦ರವರೆಗೂ ಕುಡಿಯುವ ನೀರಿನ ತೊಂದರೆ ಅಧಿಕವಾಗದಂತೆ ಜಾಗ್ರತೆ ವಹಿಸಬೇಕು. ಸ್ಥಳೀಯ ಜನಸಂಖ್ಯೆಗೆ ಅನುಗುಣವಾಗಿ ನೀರು ಪೂರೈಕೆ ಮಾಡಬೇಕು ಎಂದು ಅಧಿಕಾರಿಗಳಿಗೆ ಅವರು ನಿರ್ದೇಶಿಸಿದ್ದಾರೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಟ್ಯಾಂಕರ್‌ಗಳಿಗೆ ಟೆಂಡರ್ ಕರೆದು ನಿಗದಿಪಡಿಸಿದ ದರದಂತೆ ಗ್ರಾಮಗಳಿಗೆ ನೀರು ಒದಗಿಸಬೇಕು. ನೀರಿನ ಗುಣಮಟ್ಟದ ಮೇಲೆ ಗಮನ ಇಡಬೇಕು. ಕಲುಷಿತ ನೀರು ಸರಬರಾಜು ಮಾಡಿದಲ್ಲಿ ಸಂಬಂಧಿಸಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನೇ ಹೊಣೆ ಮಾಡಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

**<><*<><>*><>**

೧. ಉತ್ತರಕನ್ನಡ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ಇದೇ ೨೫ರಂದು ಆರಂಭವಾಗಲಿದ್ದು, ಅಂದು ಹೋಳಿಹಬ್ಬದ ಹಿನ್ನೆಲೆಯಲ್ಲಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಮೇಲ್ವಿಚಾರಕರಿಗೆ ಬಣ್ಣ ಹಚ್ಚುವುದು, ಬಣ್ಣದ ನೀರು ಎರೆಚುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಆದೇಶ ಮೀರಿದವರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ್ ತಿಳಿಸಿದ್ದಾರೆ.

೨. ಉಡುಪಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಸಲು ಪೂರ್ವ ಸಿದ್ಧತೆಯಾಗಿದೆ. ಪ್ರತಿಯೊಂದು ಪರೀಕ್ಷಾ ಕೇಂದ್ರದ ಸುತ್ತಮುತ್ತ ೨೦೦ ಮೀಟರ್ ತನಕ ಸಿಆರ್‌ಪಿಸಿ ಸೆಕ್ಷನ್ ೧೪೪ರಂತೆ ಪ್ರತಿಬಂಧಕಾಜ್ಞೆಯನ್ನು ವಿಧಿಸಲಾಗಿದೆ. ಪ್ರತಿಯೊಂದು ಪರೀಕ್ಷಾ ಕೇಂದ್ರದಲ್ಲೂ ಪೊಲೀಸ್ ಪಹರೆ ಮತ್ತು ತುರ್ತು ಚಿಕಿತ್ಸಾ ಘಟಕವನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

೩. ರಾಜ್ಯ ಕಂದಾಯ ಇಲಾಖೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಇಂದು ಉತ್ತರಕನ್ನಡ ಜಿಲ್ಲೆಯ ಕಾರವಾರದಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಭೇಟಿ ನೀಡಿ, ಅಭಿಲೇಖಾಲಯಗಳನ್ನು ಪರಿಶೀಲಿಸಿದರು. ಕಡತಗಳನ್ನು ವ್ಯವಸ್ಥಿತ ರೀತಿಯಲ್ಲಿ ಸಂರಕ್ಷಿಸಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸೇರಿದಂತೆ ಅಧಿಕಾರಿಗಳು ಹಾಜರಿದ್ದರು.

೪. ರಾಯಚೂರಿನಲ್ಲಿ ಇಂದು ಜಗದ್ಗುರು ರೇಣುಕಾಚಾರ್ಯ ಜಯಂತಿಯನ್ನು ಆಚರಿಸಲಾಯಿತು. ಜಿಲ್ಲಾಧಿಕಾರಿ, ಕನ್ನಡ ಮತ್ತು ಸಂಸ್ಕೃತ ಇಲಾಖೆಯ ಅಧಿಕಾರಿಗಳು, ಮತ್ತಿತರ ಗಣ್ಯರು, ಜಗದ್ಗುರು ರೇಣುಕಾಚಾರ್ಯ ಅವರ ಚಿತ್ರಕ್ಕೆ ಮಾಲಾರ್ಪಣೆ ಮಾಡಿದರು. ಯಾದಗಿರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲೂ ಜಗದ್ಗುರು ರೇಣುಕಾಚಾರ್ಯ ಜಯಂತಿ ಆಚರಿಸಲಾಯಿತು.

೫. ಗದಗ ಜಿಲ್ಲೆಯ ರೋಣ ತಾಲೂಕು ಅಮರಗೋಳ, ಹೊಳೆಆಲೂರು, ಮೆಣಸಗಿ ಹಾಗೂ ಹೊಳೆಮಣ್ಣೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಿಗೆ ಕುಡಿಯುವ ನೀರು ಪೂರೈಕೆ ಕುರಿತು ಇಂದು ಪರಿಶೀಲಿಸಲಾಯಿತು. ನೀರಿನ ಪೂರೈಕೆ ನಿರ್ವಹಣೆ ಕುರಿತು ಸಮಾಲೋಚಿಸಲಾಯಿತು. ಈ ಗ್ರಾಮಗಳ ಜನರ ಸಮಸ್ಯೆಗಳನ್ನು ಬಗೆಹರಿಸಲು ಕ್ರಮಕೈಗೊಳ್ಳಲಾಗುವುದು ಎಂದು ಉಪವಿಭಾಗ ಸಹಾಯಕ ಕಾರ್ಯಪಾಲಕ ಅಭಿಯಂತರರು ಭರವಸೆ ನೀಡಿದರು.

೬. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಾಡೋನಹಳ್ಳಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೃಷಿ ಸಖಿಯರಿಗೆ ನೈಸರ್ಗಿಕ ಕೃಷಿಯ ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಬಿ.ಜಿ. ಹನುಮಂತರಾಯ ಮಾತನಾಡಿ, ಇಂದಿನ ಆರೋಗ್ಯ ಸಮಸ್ಯೆಗಳಿಗೆ ಕೃಷಿಯಲ್ಲಿ ರಾಸಾಯನಿಕಗಳ ಬಳಕೆಯೇ ಕಾರಣ. ಈಗ ನೈಸರ್ಗಿಕ ಕೃಷಿ ಮತ್ತು ಸಾವಯವ ಕೃಷಿಯತ್ತ ಗಮನ ಕೇಂದ್ರೀಕರಿಸಬೇಕಾದ ಅಗತ್ಯ ಎದುರಾಗಿದೆ. ಈ ನಿಟ್ಟಿನಲ್ಲಿ ರೈತರಿಗೆ ಮಾಹಿತಿ ತಲುಪಿಸುವಲ್ಲಿ ಕೃಷಿ ಸಖಿಯರ ಪಾತ್ರ ಮಹತ್ವದ್ದು ಎಂದರು.

೭. ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ತಾಲೂಕು ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಇಂದು ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರಿಗೆ ಉದ್ಯೋಗ ಖಾತ್ರಿ ಅಭಿಯಾನ ನಡೆಯಿತು. ಬೇಸಿಗೆ ಹಾಗೂ ಬರಗಾಲದ ಹಿನ್ನೆಲೆಯಲ್ಲಿ ಗ್ರಾಮೀಣ ಜನರಿಗೆ ಮನ್ರೇಗಾ ಯೋಜನೆಯಡಿ ಸಮುದಾಯ

ಕಾಮಗಾರಿಗಳನ್ನು ನಿರಂತರ ನೌಕರಿ ಒದಗಿಸುವುದು. ಜಾಬ್‌ಕಾರ್ಡ್‌ಗಳನ್ನು ನವೀಕರಿಸುವುದು. ಮೊದಲಾದ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಯಿತು.

೮. ಏಪ್ರಿಲ್ ೧ ರಿಂದ ೩೦ರವರೆಗೆ ನಡೆಯಲಿರುವ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದ ಅಂಗವಾಗಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಜಾನುವಾರುಗಳಿಗೆ ಕಾಲುಬಾಯಿ ರೋಗ ಲಸಿಕೆ ಹಾಕಿಸಲು ಅಗತ್ಯ ಏರ್ಪಾಡು ಮಾಡಬೇಕು ಎಂದು ಪಶುಪಾಲನಾ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸೂಚಿಸಿದ್ದಾರೆ. ಜಿಲ್ಲೆಯ ಯಾವುದೇ ಜಾನುವಾರು ಲಸಿಕೆಯನ್ನು ತಪ್ಪಿಸಿಕೊಳ್ಳದಂತೆ ರೈತರಲ್ಲಿ ಜಾಗೃತಿ ಮೂಡಿಸಬೇಕು. ಲಸಿಕೆ ಹಾಕಿಸಿದ ಜಾನುವಾರಗಳ ಆರೈಕೆಯ ಬಗ್ಗೆಯೂ ರೈತರಿಗೆ ಮಾಹಿತಿ ನೀಡಬೇಕು ಎಂದು ಅವರು ತಿಳಿಸಿದ್ದಾರೆ.

೯. ಶಿವಮೊಗ್ಗ ಜಿಲ್ಲೆಯಲ್ಲಿ ಈ ಬಾರಿ ೫ ಲಕ್ಷ ೪೦ ಸಾವಿರ ಜಾನುವಾರುಗಳಿಗೆ ಕಾಲುಬಾಯಿ ರೋಗ ವಿರುದ್ಧದ ಲಸಿಕೆ ನೀಡಲಾಗುವುದು. ಈ ರಾಷ್ಟ್ರೀಯ ಕಾರ್ಯಕ್ರಮದ ಒಂದು ತಿಂಗಳ ಅವಧಿಯಲ್ಲಿ ತಪ್ಪದೇ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು. ಮಾಹಿತಿ ಪ್ರಚಾರಕ್ಕೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಗುರುದತ್ತ್ ಹೆಗಡೆ ತಿಳಿಸಿದ್ದಾರೆ.

೧೦. ಚಿಕ್ಕಮಗಳೂರು ಜಿಲ್ಲೆಯ ಕಂಚೇನಹಳ್ಳಿಯಲ್ಲಿ ನಿನ್ನೆ ಕಾಡಾನೆ ದಾಳಿಯಿಂದ ಮೃತಪಟ್ಟ ಕಾಫಿತೋಟದ ಕಾರ್ಮಿಕನ ಕುಟುಂಬಕ್ಕೆ ರಾಜ್ಯ ಸರ್ಕಾರ ೧೫ ಲಕ್ಷ ರೂಪಾಯಿ ಪರಿಹಾರವನ್ನು ಘೋಷಿಸಿದೆ. ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ರಮೇಶ್ ಬಾಬು ಪರಿಹಾರದ ಚೆಕ್‌ಅನ್ನು ಮೃತರ ಕುಟುಂಬಕ್ಕೆ ಹಸ್ತಾಂತರಿಸಿದ್ದಾರೆ.

**<><*<><>*><>**

ಕೋಲಾರ ಜಿಲ್ಲಾ ವ್ಯಾಪ್ತಿಯ ೯ ಖರೀದಿ ಕೇಂದ್ರಗಳಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿ ಅವಧಿಯನ್ನು ಜೂನ್ ೩೦ರವರೆಗೆ ವಿಸ್ತರಿಸಲಾಗಿದೆ. ಈ ಮೊದಲು ಸರ್ಕಾರದ ಆದೇಶದಂತೆ ಈ ಕೇಂದ್ರಗಳಲ್ಲಿ ರಾಗಿ ಖರೀದಿಗೆ ಈ ತಿಂಗಳ ೩೧ ಕಡೆಯ ದಿನವಾಗಿತ್ತು. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿಸಿಕೊಂಡಿರುವ ರೈತರಿಂದ ರಾಗಿ ಖರೀದಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ರೈತರು ಈ ಅವಕಾಶದ ಸದುಪಯೋಗ ಪಡೆಯಬೇಕೆಂದು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ. ಕೋಲಾರ ಜಿಲ್ಲಾ ವ್ಯಾಪ್ತಿಯ ರೈತರು, ನೋಂದಣಿ ಮಾಡಿಕೊಂಡಿರುವ ದಿನಾಂಕದಂದು ತಮ್ಮ ಸಂಗ್ರಹವನ್ನು ಕೇಂದ್ರಕ್ಕೆ ನೀಡಬೇಕು. ಹೆಚ್ಚಿನ ಮಾಹಿತಿಗೆ ೦೮೧೫೨-೨೨೨೬೧೪ ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ನಿಗಮದ ಪ್ರಕಟಣೆಯಲ್ಲಿ ಸೂಚಿಸಲಾಗಿದೆ.

**<><*<><>*><>**

ಇನ್ನು ಹವಾವರ್ತಮಾನ...

ದಕ್ಷಿಣ ಕನ್ನಡ ಜಿಲ್ಲೆಯ ಪಣಂಬೂರಿನಲ್ಲಿ ೭ ಸೆಂಟಿಮೀಟರ್‌ನಷ್ಟು ಭಾರೀ ಮಳೆಯಾಗಿದೆ. ಉಳಿದಂತೆ ರಾಜ್ಯದಲ್ಲಿ ಒಣಹವೆ ವರದಿಯಾಗಿದೆ.

ಮುನ್ಸೂಚನೆಯಂತೆ ದಕ್ಷಿಣ ಒಳನಾಡು ಮತ್ತು ಕರಾವಳಿ ಜಿಲ್ಲೆಗಳಲ್ಲಿ ಹಗುರ ಮಳೆ ಸಾಧ್ಯತೆ.

ರಾಜ್ಯದ ಗರಿಷ್ಠ ಉಷ್ಣಾಂಶ ೩೮.೮ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ಹಾಗೂ ಕನಿಷ್ಠ ಉಷ್ಣಾಂಶ ೨೦.೧ ಡಿಗ್ರಿ ಸೆಲ್ಸಿಯಸ್ ವಿಜಯಪುರದಲ್ಲಿ ದಾಖಲಾಗಿದೆ.

ಬೆಂಗಳೂರು ಮತ್ತು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣವಿದ್ದು, ಗರಿಷ್ಠ ೩೪ ಮತ್ತು ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ಕ್ಕೆ <>*><>**